# ಬುಡಕಟ್ಟು ಮಹಿಳೆಯರು ಮತ್ತು ಮಕ್ಕಳ ಕಲ್ಯಾಣ ಕಾರ್ಯಕ್ರಮಗಳು

**ಶ್ರೀನಿವಾಸ ಬಿ.ಎಸ್.**

ಅತಿಥಿ ಉಪನ್ಯಾಸಕರು, ಮಹಿಳಾ ಅಧ್ಯಯನ ಕೇಂದ್ರ, ಬೆಂಗಳೂರು ವಿಶ್ವವಿದ್ಯಾಲಯ, ಜ್ಞಾನಭಾರತಿ, ಬೆಂಗಳೂರು.

**DOI: https://doi.org/10.5281/zenodo.17487204**

## ABSTRACT:

ಭಾರತದ ಬುಡಕಟ್ಟು ಸಮುದಾಯಗಳಲ್ಲಿ ಮಹಿಳೆಯರು ಮತ್ತು ಮಕ್ಕಳು ಸಮಾಜದ ಅವಿಭಾಜ್ಯ ಅಂಗವಾಗಿದ್ದಾರೆ. ಅರಣ್ಯ ಮತ್ತು ಪ್ರಕೃತಿಯೊಂದಿಗೆ ಅನನ್ಯ ಸಂಬಂಧವನ್ನು ಸಂಬಂಧವನ್ನು ಹೊಂದಿರುವ ಇವರು ತಮ್ಮದೇ ಆದಂತಹ ಸಂಸ್ಕೃತಿ, ಭಾಷೆ, ಶಾಸ್ತ್ರ–ಸಂಪ್ರದಾಯಗಳನ್ನು, ಶಾಸ್ತ್ರ–ಸಂಪ್ರದಾಯಗಳನ್ನು, ಆಚಾರ–ವಿಚಾರಗಳನ್ನು, ಹಬ್ಬ–ಹರಿದಿನಗಳನ್ನು ಉಳಿಸಿಕೊಂಡು ಬಂದಿದ್ದಾರೆ. ಬುಡಕಟ್ಟು ಮಹಿಳೆಯರು ಮತ್ತು ಮಕ್ಕಳ ಹಕ್ಕುಗಳನ್ನು ರಕ್ಷಿಸುವುದು, ಅವರ ಸಬಲೀಕರಣಕ್ಕೆ ಒತ್ತು ನೀಡುವುದು ಮತ್ತು ಅವರ ಸಾಂಪ್ರದಾಯಿಕ ಜೀವನಶೈಲಿಯನ್ನು ಗೌರವಿಸುವುದು ಅತ್ಯಂತ ಮುಖ್ಯವಾಗಿದೆ. ಹಾಗೂ ಬುಡಕಟ್ಟು ಮಹಿಳೆಯರು ಮತ್ತು ಮಕ್ಕಳು ಹಲವಾರು ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಮತ್ತು ಆರೋಗ್ಯ ಸಮಸ್ಯೆಗಳನ್ನು, ಸವಾಲುಗಳನ್ನು ಎದುರಿಸುತ್ತಿದ್ದಾರೆ. ಈ ಬುಡಕಟ್ಟು ಸಮುದಾಯಗಳ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರವು ಹಲವಾರು ಕಾರ್ಯಕ್ರಮಗಳನ್ನು, ಯೋಜನೆಗಳನ್ನು ಜಾರಿಗೊಳಿಸಿವೆ.

## KEYWORDS:

ಬುಡಕಟ್ಟು ಸಮುದಾಯಗಳು, ಮಹಿಳೆಯರು, ಮಕ್ಕಳು, ಸಬಲೀಕರಣ, ಕಾರ್ಯಕ್ರಮಗಳು, ಯೋಜನೆಗಳು.

**ಪೀಠಿಕೆ:**

ಭಾರತವು ವೈವಿಧ್ಯಮಯ ಸಂಸ್ಕೃತಿ ಮತ್ತು ಸಂಪ್ರದಾಯಗಳ ನೆಲೆಬೀಡು. ಈ ವೈವಿಧ್ಯತೆಯಲ್ಲಿ ಬುಡಕಟ್ಟು ಸಮುದಾಯಗಳು ತಮ್ಮದೇ ಆದಂತಹ ವಿಶಿಷ್ಟ ಸ್ಥಾನಮಾನ ಹೊಂದಿವೆ. ಬುಡಕಟ್ಟು ಸಮುದಾಯಗಳು ಸಾಮಾನ್ಯವಾಗಿ ನಗರ ಜೀವನದಿಂದ ದೂರವಿದ್ದು, ಅವರು ತಮ್ಮದೇ ಆದಂತಹ ವಿಶಿಷ್ಟ ಸಂಪ್ರದಾಯಗಳನ್ನು, ಆಚಾರಗಳನ್ನು ಮತ್ತು ಜೀವನ ಶೈಲಿಯನ್ನು ಉಳಿಸಿಕೊಂಡು ಬಂದಿದ್ದಾರೆ. ಅದೇ ರೀತಿ ಕರ್ನಾಟಕವು ಕೂಡ ಹಲವಾರು ಬುಡಕಟ್ಟು ಜನಾಂಗಗಳ ತವರೂರಾಗಿದೆ. ಪ್ರತಿಯೊಂದು ಬುಡಕಟ್ಟು ಜನಾಂಗದವರು ತಮ್ಮದೇ ಆದಂತಹ ಭಾಷೆ, ಸಂಸ್ಕೃತಿ,

ಜೀವನಶೈಲಿ ಮತ್ತು ಸಂಪ್ರದಾಯಗಳನ್ನು ಹೊಂದಿದ್ದಾರೆ. ಅನೇಕ ಬುಡಕಟ್ಟು ಸಮುದಾಯಗಳು ಪ್ರಕೃತಿಯ ಆರಾಧಕರಾಗಿದ್ದು ಮರ, ಗಿಡ, ಪ್ರಾಣಿ ಮತ್ತು ಪಕ್ಷಿಗಳನ್ನು ಪೂಜಿಸುವುದನ್ನು ಕಾಣಬಹುದು.

ಭಾರತಕ್ಕೆ ಸ್ವಾತಂತ್ರ್ಯ ಸ್ವಾತಂತ್ರ್ಯ ಬಂದು 78 ವರ್ಷಗಳು ಕಳೆದರೂ ಸಹ ಬುಡಕಟ್ಟು ಮಹಿಳೆಯರ ಮತ್ತು ಮಕ್ಕಳ ಸ್ಥಿತಿ–ಗತಿಗಳು ಮತ್ತು ಸ್ಥಾನಮಾನಗಳಲ್ಲಿ ಯಾವುದೇ ರೀತಿಯ ಬದಲಾವಣೆಯಾಗದಿರುವುದನ್ನು ನೋಡಬಹುದು. ಭಾರತದಲ್ಲಿ ಸುಮಾರು 700 ಕ್ಕೂ ಅಧಿಕ ಆದಿವಾಸಿ ಸಮುದಾಯಗಳನ್ನು ಗುರುತಿಸಿದ್ದು, ಅದೇ ರೀತಿ ಕರ್ನಾಟಕದಲ್ಲಿ 50 ಬುಡಕಟ್ಟು ಸಮುದಾಯಗಳಿದ್ದು ಇವರು ಸಾಮಾನ್ಯವಾಗಿ ನಾಗರಿಕ ಸಮಾಜದ ಜನರಿಂದ ದೂರವಿದ್ದು, ದಟ್ಟವಾದ ಅರಣ್ಯ, ಆಳವಾದ ಕಣಿವೆ, ಗುಡ್ಡ–ಗಾಡು, ಮುಂತಾದ ದುರ್ಗಮ ಪ್ರದೇಶಗಳಲ್ಲಿ ತಮ್ಮದೇ ಆದ ಭಾಷೆ, ಆಚಾರ–ವಿಚಾರ, ರೂಢಿ ಸಂಪ್ರದಾಯಗಳನ್ನು ಮೈಗೂಡಿಸಿಕೊಂಡು ಬದುಕುತ್ತಿರುವ ಜನರೇ ಬುಡಕಟ್ಟು ಸಮುದಾಯಗಳೆಂದು ಕರೆಯಬಹುದು.

2011 ರ ಜನಗಣತಿಯ ಪ್ರಕಾರ ಭಾರತದಲ್ಲಿ ಪರಿಶಿಷ್ಟ ಪಂಗಡದವರ ಜನಸಂಖ್ಯೆಯು 10,45,45,716 ಇದ್ದು, ಇದರಲ್ಲಿ 5,18,71,211 ಮಹಿಳೆಯರಿದ್ದಾರೆ. ಅದೇ ರೀತಿ ಕರ್ನಾಟಕದಲ್ಲಿ ಪರಿಶಿಷ್ಟ ಪಂಗಡದವರ ಜನಸಂಖ್ಯೆಯು 42,48,987 ಇದ್ದು, ಇದರಲ್ಲಿ 21,14,233 ಮಹಿಳೆಯರಿರುವುದನ್ನು ನಾವು ಕಾಣಬಹುದಾಗಿದೆ.

ಬುಡಕಟ್ಟು ಜನರ ಅಭಿವೃದ್ಧಿಗಾಗಿ ಕೆಂದ್ರ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಲವಾರು ಕಲ್ಯಾಣ ಕಾರ್ಯಕ್ರಮಗಳನ್ನು ಹಾಗೂ ಯೋಜನೆಗಳನ್ನು ಜಾರಿಗೆ ತಂದು ಕೋಟಿಗಟ್ಟಲೆ ಹಣವನ್ನು ಖರ್ಚು ಮಾಡಿದರು, ಮೀಸಲಿಟ್ಟರು ಈ ಬುಡಕಟ್ಟು ಜನಾಂಗಗಳ ಸಮಸ್ಯೆಗಳನ್ನು ಹಾಗೂ ವಿಶೇಷವಾಗಿ ಮಹಿಳೆಯರ ಮತ್ತು ಮಕ್ಕಳ ಸಮಸ್ಯೆಗಳನ್ನು ಸಂಪೂರ್ಣವಾಗಿ ಪರಿಹರಿಸಲು ಸಾಧ್ಯವಾಗಿಲ್ಲ. ಈ ಬುಡಕಟ್ಟು ಮಹಿಳೆಯರ ಮತ್ತು ಮಕ್ಕಳ ಭವಿಷ್ಯ ಉತ್ತಮವಾಗಬೇಕಾದರೆ, ಸರ್ಕಾರ ರೂಪಿಸುವತಹ ರೂಪಿಸುವಂತಹ ಪ್ರತಿಯೊಂದು ಕಾರ್ಯಕ್ರಮಗಳು ಮತ್ತು ಯೋಜನೆಗಳು ಹಾಗೂ ಸರ್ಕಾರದ ಸವಲತ್ತುಗಳು ಕಟ್ಟಕಡೆಯ ಬುಡಕಟ್ಟು ಮಹಿಳೆಯರು ಮತ್ತು ಮಕ್ಕಳಿಗೆ ತಲುಪಿದರೆ ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಸಬಲೀಕರಣವಾಗಲು ಸಾಧ್ಯವಾಗುತ್ತದೆ.

ಭೌಗೋಳಿಕ ಪ್ರತ್ಯೇಕತೆಯಿಂದ ಬುಡಕಟ್ಟು ಮಹಿಳೆಯರು ಮತ್ತು ಮಕ್ಕಳು ಅನೇಕ ರೀತಿಯ ಸವಾಲುಗಳನ್ನು ಎದುರಿಸುತ್ತಿದ್ದಾರೆ. ಶಿಕ್ಷಣದ ಕೊರತೆ, ಆರೋಗ್ಯ ಸಮಸ್ಯೆಗಳು, ಆರ್ಥಿಕ ಹಿಂದುಳಿದಿರುವಿಕೆ, ಸಾಮಾಜಿಕ ತಾರತಮ್ಯಗಳು, ಅರಿವಿನ ಕೊರತೆ, ಸಾಮಾಜಿಕ ಕಟ್ಟುಪಾಡುಗಳು ಇವರ ಪ್ರಗತಿಗೆ ಹಾಗೂ ಸಬಲೀಕರಣಕ್ಕೆ ಅಡ್ಡಿಯಾಗಿವೆ ಎಂದು ಹೇಳಬಹುದು.

**ಮಾಹಿತಿ ಸಂಗ್ರಹಣಾ ವಿಧಾನ:**

ಕರ್ನಾಟಕ ಸರ್ಕಾರವು ಬುಡಕಟ್ಟು ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದೆ. ಇದಕ್ಕಾಗಿ ಹಲವಾರು ಕಲ್ಯಾಣ ಕಾರ್ಯಕ್ರಮಗಳನ್ನು, ಯೋಜನೆಗಳನ್ನು ರೂಪಿಸಲಾಗಿದೆ ಮತ್ತು ಅನುದಾನವನ್ನು ಸಹ ಮೀಸಲಿಡಲಾಗಿದೆ. ಬುಡಕಟ್ಟು ಮಹಿಳೆಯರ ಮತ್ತು ಮಕ್ಕಳ ಕಾರ್ಯಕ್ರಮಗಳು ಈ ರೀತಿ ಇವೆ:

**ಮಹಿಳಾ ಅಭಿವೃದ್ಧಿ ಕಾರ್ಯಕ್ರಮಗಳು:**

1. ಬುಡಕಟ್ಟು ಮಹಿಳೆಯರಿಗಾಗಿ ವಿಶೇಷ ಸ್ವಸಹಾಯ ಗುಂಪುಗಳು:- ಕರ್ನಾಟಕ ಸರ್ಕಾರವು ಬುಡಕಟ್ಟು ಮಹಿಳೆಯರನ್ನು ಸಂಘಟಿಸಿ, ಆರ್ಥಿಕವಾಗಿ ಸಬಲರಾಗಲು ಸ್ವಸಹಾಯ ಗುಂಪುಗಳನ್ನು ರಚಿಸಲು ಪ್ರೋತ್ಸಾಹ ನೀಡುತ್ತಿದೆ. ಈ ಗುಂಪುಗಳಿಗೆ ಬ್ಯಾಂಕ್‌ನಿಂದ ಬ್ಯಾಂಕಿನಿಂದ ಸಾಲ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ಕೃಷಿ, ಕರಕುಶಲ ವಸ್ತುಗಳ ತಯಾರಿಕೆ, ಸಣ್ಣ ವ್ಯಾಪಾರ ಮತ್ತು ಇತರ ಆದಾಯಗಳಿಸುವ ಚಟುವಟಿಕೆಗಳನ್ನು ಕೈಗೊಳ್ಳಲು ತರಬೇತಿ ಮತ್ತು ಮಾರ್ಗದರ್ಶನವನ್ನು ನೀಡಲಾಗುತ್ತದೆ.
2. ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮಗಳು:- ಬುಡಕಟ್ಟು ಮಹಿಳೆಯರಿಗೆ ಅವರ ಆಸಕ್ತಿ ಮತ್ತು ಸಾಮರ್ಥ್ಯಕ್ಕೆ ಅನುಗುಣವಾಗಿ ಕೌಶಲ್ಯ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಹೊಲಿಗೆ, ಕಸೂತಿ, ಗಣಕಯಂತ್ರ ನಿರ್ವಹಣೆ, ಪ್ರವಾಸೋದ್ಯಮ ಮತ್ತು ಇತರ ಉದ್ಯೋಗಾಧಾರಿತ ಕೌಶಲ್ಯಗಳನ್ನು ಕಲ್ಪಿಸಲಾಗುತ್ತಿದೆ. ಇದು ಸ್ವಯಂ ಉದ್ಯೋಗವನ್ನು ಪ್ರಾರಂಭಿಸಲು ಸಹಾಯ ಮಾಡುತ್ತದೆ.
3. ಆರೋಗ್ಯ ಸೇವೆಗಳು:- ಬುಡಕಟ್ಟು ಪ್ರದೇಶಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು. ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಮೊಬೈಲ್ ಆರೋಗ್ಯ ಘಟಕಗಳ ಮೂಲಕ ಆರೋಗ್ಯ ಸೇವೆಗಳನ್ನು ಒದಗಿಸಲಾಗುತ್ತಿದೆ. ಗರ್ಭಿಣಿ ಮಹಿಳೆಯರು ಮತ್ತು ಬಾಣಂತಿಯರಿಗೆ ವಿಶೇಷ ಆರೋಗ್ಯ ತಪಾಸಣೆ ಮತ್ತು ಪೌಷ್ಟಿಕಾಂಶದ ನೆರವು ನೀಡಲಾಗುತ್ತಿದೆ. ಮಹಿಳೆಯರಲ್ಲಿನ ರಕ್ತಹೀನತೆ ಮತ್ತು ಇತರ ಆರೋಗ್ಯ ಸಮಸ್ಯೆಗಳನ್ನು ನಿವಾರಿಸಲು ಕ್ರಮ ಕೈಗೊಳ್ಳಲಾಗುತ್ತದೆ.
4. ಜಮೀನು ಹಕ್ಕು ಮತ್ತು ಆಸ್ಥಿ ಆಸ್ತಿ ಮಾಲೀಕತ್ವ:- ಬುಡಕಟ್ಟು ಮಹಿಳೆಯರಿಗೆ ಜಮೀನಿನ ಹಕ್ಕು ಮತ್ತು ಆಸ್ಥಿಯ ಆಸ್ತಿಯ ಮಾಲೀಕತ್ವವನ್ನು ನೀಡಲು ಸರ್ಕಾರವು ಕ್ರಮಗಳನ್ನು ಕೈಗೊಂಡಿದೆ. ಇದು ಅವರ ಆರ್ಥಿಕ ಭದ್ರÀತೆಯನ್ನು ಭದ್ರತೆಯನ್ನು ಹೆಚ್ಚಿಸುತ್ತದೆ. ಮತ್ತು ನಿರ್ಧಾರ ತೆಗೆದುಕೊಳ್ಳುವಲ್ಲಿ ಅವರನ್ನು ಸಬಲರನ್ನಾಗಿಸುತ್ತದೆ.

5. ಸಾಮಾಜಿಕ ಭದ್ರತೆ ಮತ್ತು ಕಾನೂನು ನೆರವು:- ಬುಡಕಟ್ಟು ಮಹಿಳೆಯರ ಮೇಲಿನ ದೌರ್ಜನ್ಯಗಳನ್ನು ತಡೆಗಟ್ಟಲು ಕಠಿಣ ಕಾನೂನುಗಳನ್ನು ಜಾರಿಗೊಳಿಸಲಾಗಿದೆ. ಕಾನೂನು ಅರಿವು ಮೂಡಿಸುವಂತಹ ಕಾರ್ಯಕ್ರಮಗಳು ಮತ್ತು ಸಹಾಯವಾಣಿಗಳನ್ನು ಸ್ಥಾಪಿಸಲಾಗಿದೆ. ಸಂತ್ರಸ್ಥ ಸಂತ್ರಸ್ತ ಮಹಿಳೆಯರಿಗೆ ಉಚಿತ ಕಾನೂನು ನೆರವು ಮತ್ತು ಆಪ್ತಸಮಾಲೋಚನ ಆಪ್ತಸಮಾಲೋಚನಾ ಸೇವೆಗಳನ್ನು ಒದಗಿಸಲಾಗುತ್ತಿದೆ.

6. ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮೀಸಲಾತಿ:- ಸ್ಥಳೀಯ ಆಡಳಿತದಲ್ಲಿ ಬುಡಕಟ್ಟು ಮಹಿಳೆಯರ ಪಾಲ್ಗೊಳ್ಳುವಿಕೆಯನ್ನು ಹೆಚ್ಚಿಸಲು ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮೀಸಲಾತಿ ಕಲ್ಪಿಸಲಾಗಿದೆ. ಇದು ಮಹಿಳೆಯರಿಗೆ ತಮ್ಮ ಸಮುದಾಯ ಅಭಿವೃದ್ಧಿ ನಿರ್ಧಾರಗಳಲ್ಲಿ ನೇರವಾಗಿ ಭಾಗವಹಿಸಲು ಅವಕಾಶ ನೀಡುತ್ತದೆ.

**ಶೈಕ್ಷಣಿಕ ಅಭಿವೃದ್ಧಿ ಕಾರ್ಯಕ್ರಮಗಳು:**

**1. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯ ಮತ್ತು ವಿದ್ಯಾರ್ಥಿ ವೇತನ:**

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಇಲಾಖೆಯ ವತಿಯಿಂದ 136 ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಈ ವಿದ್ಯಾರ್ಥಿ ನಿಲಯಗಳಲ್ಲಿ 5 ರಿಂದ 10 ನೇ ತರಗತಿಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಆರಂಭಿಕ ಶಿಕ್ಷಣ ಸೌಲಭ್ಯವನ್ನು ಪಡೆದುಕೊಳ್ಳಬಹುದು. ಹಾಗೂ ಈ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳಿಗೆ ಉಚಿತವಾದ ಪ್ರವೇಶವನ್ನು, ಊಟವನ್ನು, ವಸತಿಯನ್ನು, ಲೇಖನ ಸಾಮಗ್ರಿಗಳನ್ನು, ಸಮವಸ್ತ್ರವನ್ನು ಸಮವಸ್ತ್ರವನ್ನು ಇನ್ನು ಮುಂತಾದ ಸೌಲಭ್ಯಗಳನ್ನು ಒದಗಿಸಲಾಗುತ್ತದೆ. ಇಲಾಖಾವತಿಯಿಂದ ಇಲಾಖೆಯ ವತಿಯಿಂದ ನಡೆಸಲಾಗುತ್ತಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆಯನ್ನು ವಿದ್ಯಾರ್ಥಿಗಳ ಅವಶ್ಯಕತೆಗೆ ಅನುಗುಣವಾಗಿ ಹೆಚ್ಚಿಗೆ ಮಾಡಲಾಗುತ್ತದೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಕರ್ನಾಟಕ ಸರ್ಕಾರವು 2024-25 ನೇ ಸಾಲಿನಲ್ಲಿ ರೂ.5338.23 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ವಿದ್ಯಾರ್ಥಿ ವೇತನ:- 1 ರಿಂದ 8ನೇ ತರಗತಿಯ ವರೆಗಿನ ವಿದ್ಯಾರ್ಥಿಗಳಿಗೆ

| ತರಗತಿ | ಬಾಲಕರು | ಬಾಲಕಿಯರು |
|---|---|---|
| 1 ರಿಂದ 5 | 1,000/- | 1,100/- |
| 6 ರಿಂದ 7 | 1,150/- | 1,250/- |
| 8ನೇ ತರಗತಿಗೆ | 1,250/- | 1,350/- |

ಈ ಯೋಜನೆಯ ಅನುಷ್ಟಾನಕ್ಕಾಗಿ ಅನುಷ್ಠಾನಕ್ಕಾಗಿ ಇಲಾಖೆಯು 2024–25 ನೇ ಸಾಲಿನಲ್ಲಿ ರೂ.3000.00 ಲಕ್ಷಗಳನ್ನು ಮೀಸಲಿಡಲಾಗಿದೆ.

ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳು ಇತರೆ ವಿದ್ಯಾರ್ಥಿಗಳ ಜೊತೆಯಲ್ಲಿ ಸ್ವರ್ಧಾತ್ಮಕ ಸ್ಪರ್ಧಾತ್ಮಕ ಮನೋಭಾವವನ್ನು ಬೆಳೆಸಿಕೊಂಡು ಹೆಚ್ಚು ಅಂಕಗಳನ್ನು ಪಡೆಯುವ ಉದ್ದೇಶಕ್ಕಾಗಿ 9 ಮತ್ತು 10 ನೇ ತರಗತಿಯ ವಿದ್ಯಾರ್ಥಿಗಳಿಗೆ ರೂ.3,000/ ಗಳ ವಿದ್ಯಾರ್ಥಿವೇತನವನ್ನು ನೀಡಲಾಗುತ್ತದೆ. ಈ ಯೋಜನೆಯ ಅನುಷ್ಟಾನಕ್ಕಾಗಿ ಅನುಷ್ಠಾನಕ್ಕಾಗಿ ಇಲಾಖೆಯು 2024–25 ನೇ ಸಾಲಿನಲ್ಲಿ ರೂ.2000.00 ಲಕ್ಷಗಳನ್ನು ಮೀಸಲಿಡಲಾಗಿದೆ.

**2. ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಮತ್ತು ವಿದ್ಯಾರ್ಥಿ ವೇತನ:**

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಇಲಾಖೆಯ ವತಿಯಿಂದ ಪದವಿ ಪೂರ್ವ ಶಿಕ್ಷಣ, ಪದವಿ ಮತ್ತು ಉನ್ನತ ಶಿಕ್ಷಣವನ್ನು ಪಡೆದುಕೊಳ್ಳಲು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯದ ವ್ಯವಸ್ಥೆಯನ್ನು ಮಾಡಲಾಗುತ್ತದೆ. ಹಾಗೂ ಈ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳಿಗೆ ಉಚಿತವಾದ ಪ್ರವೇಶವನ್ನು, ಊಟವನ್ನು, ವಸತಿಯನ್ನು, ಇನ್ನು ಮುಂತಾದ ಸೌಲಭ್ಯಗಳನ್ನು ಒದಗಿಸಲಾಗುತ್ತದೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಕರ್ನಾಟಕ ಸರ್ಕಾರವು 2024–25 ನೇ ಸಾಲಿನಲ್ಲಿ ರೂ.3953.78 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

ವಿವಿಧ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪೋಷಕರ ಕುಟುಂಬದ ವಾರ್ಷಿಕ ವರಮಾನ ರೂ.2.50 ಲಕ್ಷಗಳ ಮಿತಿಯೊಳಗಿರಬೇಕು. ವಿದ್ಯಾರ್ಥಿಗಳಿಗೆ ಭಾರತ ಸರ್ಕಾರ ನಿಗದಿ ಮಾಡಿರುವ ದರದಲ್ಲಿ ವಿದ್ಯಾರ್ಥಿ ವೇತನ ಮಂಜೂರು ಮಾಡಲಾಗುತ್ತದೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಕರ್ನಾಟಕ ಸರ್ಕಾರವು 2024–25 ನೇ ಸಾಲಿನಲ್ಲಿ ರೂ.4166.67 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

**3. ಆಶ್ರಮ ಶಾಲೆಗಳು:**

1 ರಿಂದ 5ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ, ವಸತಿ ಹಾಗೂ ಇನ್ನಿತರ ಸೌಲಭ್ಯಗಳನ್ನು ಆಶ್ರಮ ಶಾಲೆಗಳಲ್ಲಿ ನೀಡಲಾಗುತ್ತದೆ. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಇಲಾಖೆಯ ವತಿಯಿಂದ 119 ಆಶ್ರಮ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಕರ್ನಾಟಕ ಸರ್ಕಾರವು 2024–25 ನೇ ಸಾಲಿನಲ್ಲಿ ರೂ.6715.55 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

**4. ಖಾಸಗಿ ವಿದ್ಯಾರ್ಥಿ ನಿಲಯಗಳಿಗೆ ಸಹಾಯಧನ:**

ಸರ್ಕಾರದಿಂದ ಅನುದಾನಕ್ಕಾಗಿ ಮಾನ್ಯತೆ ಪಡೆದು ವಿದ್ಯಾರ್ಥಿನಿಲಯಗಳನ್ನು ನಡೆಸುವಂತಹ ಸ್ವಯಂ ಸೇವಾ ಸಂಸ್ಥೆಗಳಿಗೆ ಉತ್ತೇಜನ ನೀಡಲು ಸಹಾಯಧನ ನೀಡಲಾಗುತ್ತದೆ. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಇಲಾಖೆಯ ವತಿಯಿಂದ 25 ಅನುದಾನಿತ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು ಇದರಲ್ಲಿ 2245 ವಿದ್ಯಾರ್ಥಿಗಳು ಪ್ರಯೋಜನ ಪಡೆಯುತ್ತಿದ್ದಾರೆ.

ಮೆಟ್ರಿಕ್ ಪೂರ್ವ ವಿದ್ಯಾರ್ಥಿಗೆ ಊಟದ ವೆಚ್ಚಕ್ಕಾಗಿ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳಿಗೆ ರೂ.1,450 ಅಂತೆ ಅನುದಾನ ನೀಡಲಾಗುತ್ತದೆ. ಮೆಟ್ರಿಕ್ ನಂತರದ ವಿದ್ಯಾರ್ಥಿಗೆ ಊಟದ ವೆಚ್ಚಕ್ಕಾಗಿ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳಿಗೆ ರೂ.1,550 ಅಂತೆ ಅನುದಾನ ನೀಡಲಾಗುತ್ತದೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಕರ್ನಾಟಕ ಸರ್ಕಾರವು 2024–25 ನೇ ಸಾಲಿನಲ್ಲಿ ರೂ.188.33 ಲಕ್ಷಗಳನ್ನು ನಿಗದಿಪಡಿಸಲಾಗಿದೆ.

**5. ಶಿಕ್ಷಣಕ್ಕೆ ಪ್ರೋತ್ಸಾಹ:**

ಬುಡಕಟ್ಟು ಮಹಿಳೆಯರು ಮತ್ತು ಬಾಲಕಿಯರ ಶಿಕ್ಷಣವನ್ನು ಉತ್ತೇಜಿಸಲು ವಿದ್ಯಾರ್ಥಿವೇತನ, ಉಚಿತ ಪಠ್ಯಪುಸ್ತಕಗಳು, ಸಮವಸ್ತ್ರ ಸಮವಸ್ತ್ರ ಮತ್ತು ಹಾಸ್ಟೆಲ್ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ದೂರದ ಪ್ರದೇಶಗಳ ಹೆಣ್ಣು ಮಕ್ಕಳಿಗೆ ವಸತಿ ಶಾಲೆಗಳು ಮತ್ತು ಕಾಲೇಜುಗಳನ್ನು ಸ್ಥಾಪಿಸಲಾಗಿದೆ. ವಯಸ್ಕರ ಶಿಕ್ಷಣ ಕಾರ್ಯಕ್ರಮಗಳ ಮೂಲಕ ಅನಕ್ಷರಸ್ಥ ಮಹಿಳೆಯರಿಗೆ ಶಿಕ್ಷಣ ನೀಡಲಾಗುತ್ತಿದೆ.

**6. ವಿಶೇಷ ಶಾಲೆಗಳು ಮತ್ತು ವಸತಿ ಶಾಲೆಗಳು:**

ಬುಡಕಟ್ಟು ಪ್ರದೇಶಗಳಲ್ಲಿ ಗುಣಮಟ್ಟದ ಶಿಕ್ಷಣವನ್ನು ಒದಗಿಸಲು ವಿಶೇಷ ಶಾಲೆಗಳು ಮತ್ತು ವಸತಿ ಶಾಲೆಗಳನ್ನು ಸ್ಥಾಪಿಸಲಾಗಿದೆ. ಈ ಶಾಲೆಗಳಲ್ಲಿ ಉತ್ತಮ ಶಿಕ್ಷಕರು, ಮೂಲಭೂತ ಸೌಕರ್ಯಗಳು ಮತ್ತು ಪಠ್ಯೇತರ ಚಟುವಟಿಕೆಗಳಿಗೆ ಅವಕಾಶವನ್ನು ಕಲ್ಪಿಸಲಾಗಿದೆ. ದೂರದ ಪ್ರದೇಶಗಳ ಮಕ್ಕಳಿಗೆ ವಸತಿ ನಿಲಯಗಳು ಸುರಕ್ಷಿತ ವಾತಾವರಣದಲ್ಲಿ ಶಿಕ್ಷಣ ಪಡೆಯಲು ಸಹಾಯ ಮಾಡುತ್ತವೆ.

**7. ಶಿಕ್ಷಣಕ್ಕೆ ಪ್ರೋತ್ಸಾಹ ಧನ ಮತ್ತು ವಿದ್ಯಾರ್ಥಿವೇತನ:**

ಬುಡಕಟ್ಟು ಮಕ್ಕಳು ಪ್ರಾಥಮಿಕ ಹಂತದಿಂದ ಹಂತದಿಂದ ಉನ್ನತ ಶಿಕ್ಷಣದವರೆಗೆ ವ್ಯಾಸಂಗ ಮಾಡಲು ಸರ್ಕಾರವು ಪ್ರೋತ್ಸಾಹ ಧನ ಮತ್ತು ವಿದ್ಯಾರ್ಥಿವೇತನ ನೀಡುತ್ತದೆ. ಇದು ಬಡ ಕುಟುಂಬಗಳ ಮಕ್ಕಳು ಶಿಕ್ಷಣವನ್ನು ಮುಂದುವರೆಸಲು ಸಹಾಯ ಮಾಡುತ್ತದೆ.

**8. ಮಧ್ಯಾಹ್ನದ ಬಿಸಿಯೂಟ ಯೋಜನೆ:**

ಈ ಯೋಜನೆಯು ಬುಡಕಟ್ಟು ಪ್ರದೇಶಗಳ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಓದುತ್ತಿರುವಂತಹ ಮಕ್ಕಳಿಗೆ ಪೌಷ್ಟಿಕಾಂಶಯುಕ್ತ ಮಧ್ಯಾಹ್ನದ ಬಿಸಿ ಊಟವನ್ನು ಒದಗಿಸುತ್ತದೆ. ಇದು ಮಕ್ಕಳ ಶಾಲಾ ಹಾಜರಾತಿಯನ್ನು ಹೆಚ್ಚಿಸುವುದಲ್ಲದೆ, ಅವರ ಆರೋಗ್ಯ ಮತ್ತು ಕಲಿಕೆಯ ಸಾಮರ್ಥ್ಯವನ್ನು ಸುಧಾರಿಸುತ್ತದೆ.

**9. ಅಂಗನವಾಡಿ ಕೇಂದ್ರಗಳು:**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಗಳ(I.C.D.S) ಅಡಿಯಲ್ಲಿ ಬುಡಕಟ್ಟು ಪ್ರದೇಶಗಳಲ್ಲಿ ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಈ ಕೇಂದ್ರಗಳು 6 ವರ್ಷದೊಳಗಿನ ಮಕ್ಕಳಿಗೆ ಪೌಷ್ಟಿಕ ಆಹಾರ, ಆರೋಗ್ಯ ತಪಾಸಣೆ, ಲಸಿಕೆ, ಶಾಲಾಪೂರ್ವ ಶಿಕ್ಷಣ ಮತ್ತು ತಾಯಂದಿರಿಗೆ ಆರೋಗ್ಯ ಹಾಗೂ ಪೌಷ್ಟಿಕಾಂಶಯುಕ್ತ ಆಹಾರವನ್ನು ನೀಡುತ್ತದೆ.

**10. ಪೌಷ್ಟಿಕಾಂಶದ ನೆರವು:**

ಅಪೌಷ್ಟಿಕತೆಯಿಂದ ಬಳಲುತ್ತಿರುವ ಬುಡಕಟ್ಟು ಮಕ್ಕಳಿಗೆ ವಿಶೇಷ ಪೌಷ್ಟಿಕಾಂಶದ ಆಹಾರ ಮತ್ತು ಪೂರಕ ಆಹಾರಗಳನ್ನು ಒದಗಿಸಲಾಗುತ್ತಿದೆ. ಅಂಗನವಾಡಿ ಕಾರ್ಯಕರ್ತೆಯರು ಮತ್ತು ಆರೋಗ್ಯ ಕಾರ್ಯಕರ್ತೆಯರು ಈ ನಿಟ್ಟಿನಲ್ಲಿ ಮಹತ್ವದ ಪಾತ್ರ ವಹಿಸುತ್ತಾರೆ.

**11. ಸರ್ವ ಶಿಕ್ಷಣ ಅಭಿಯಾನ:**

ಈ ಕಾರ್ಯಕ್ರಮವು ಬುಡಕಟ್ಟು ಪ್ರದೇಶಗಳಲ್ಲಿ ಪ್ರಾಥಮಿಕ ಶಿಕ್ಷಣವನ್ನು ಸಾರ್ವತ್ರಿಕರಣಗೊಳಿಸುವ ಗುರಿಯನ್ನು ಹೊಂದಿದೆ. ಶಾಲೆಗಳನ್ನು ಸ್ಥಾಪಿಸುವುದು, ಶಿಕ್ಷಕರನ್ನು ನೇಮಿಸುವುದು, ಶಾಲಾ ಸೌಲಭ್ಯಗಳನ್ನು ಒದಗಿಸುವುದು ಮತ್ತು ಬುಡಕಟ್ಟು ಮಕ್ಕಳಿಗೆ ವಿಶೇಷ ಶೈಕ್ಷಣಿಕ ನೆರವು ನೀಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ವಸತಿ ಶಾಲೆಗಳು ಮತ್ತು ಹಾಸ್ಟೆಲ್ ಸೌಲಭ್ಯಗಳು ದೂರದ ಪ್ರದೇಶಗಳ ಮಕ್ಕಳಿಗೆ ಶಿಕ್ಷಣ ಪಡೆಯಲು ಸಹಕಾರಿಯಾಗಿವೆ.

**12. ರಾಷ್ಟ್ರೀಯ ರಾಷ್ಟ್ರೀಯ ಆರೋಗ್ಯ ಮಿಷನ್:**

ಈ ಮಿಷನ್ ಅಡಿಯಲ್ಲಿ ಬುಡಕಟ್ಟು ಪ್ರದೇಶಗಳಲ್ಲಿ ಆರೋಗ್ಯ ಸೇವೆಗಳನ್ನು ಬಲಪಡಿಸಲಾಗಿದೆ. ಮಕ್ಕಳ ಆರೋಗ್ಯ ತಪಾಸಣೆ, ಲಸಿಕಾ ಕಾರ್ಯಕ್ರಮಗಳು, ಪೌಷ್ಟಿಕಾಂಶದ ಕೊರತೆ ನಿವಾರಣೆ ಮತ್ತು ತಾಯಿ ಮತ್ತು ಮಕ್ಕಳ ಆರೋಗ್ಯಕ್ಕೆ ವಿಶೇಷ ಗಮನ ಹರಿಸಲಾಗುತ್ತದೆ. ಅಂಗನವಾಡಿ ಕೇಂದ್ರಗಳು ಈ ನಿಟ್ಟಿನಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ.

**13. ಬುಡಕಟ್ಟು ಉಪ ಯೋಜನೆ:**

ರಾಜ್ಯ ಸರ್ಕಾರಗಳು ತಮ್ಮ ವಾರ್ಷಿಕ ಯೋಜನೆಗಳಲ್ಲಿ ಬುಡಕಟ್ಟು ಜನರ ಅಭಿವೃದ್ಧಿಗಾಗಿ ನಿರ್ದಿಷ್ಟ ಮೊತ್ತವನ್ನು ಮೀಸಲಿಡಲು ಈ ಯೋಜನೆ ನಿರ್ದೇಶಿಸುತ್ತದೆ. ಈ ಹಣವನ್ನು ಬುಡಕಟ್ಟು ಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ಇತರ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಬಳಸಲಾಗುತ್ತದೆ.

ಸರ್ಕಾರವು ಈ ಕಾರ್ಯಕ್ರಮಗಳ ಪ್ರಯತ್ನಗಳಿಂದ ಬುಡಕಟ್ಟು ಮಹಿಳೆಯರ ಮತ್ತು ಮಕ್ಕಳ ಜೀವನದಲ್ಲಿ ಸಾಕಷ್ಟು ಬದಲಾವಣೆಗಳನ್ನು ಕಾಣಬಹುದಾಗಿದೆ. ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಇನ್ನಿತರ ಕಾರ್ಯಕ್ರಮಗಳು ಕೂಡ ಬುಡಕಟ್ಟು ಮಹಿಳೆಯರು ಮತ್ತು ಮಕ್ಕಳಿಗೆ ಅನ್ವಯವಾಗುತ್ತವೆ.

ಬುಡಕಟ್ಟು ಮಹಿಳೆಯರು ಮತ್ತು ಮಕ್ಕಳು ಹಲವಾರು ರೀತಿಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಅವುಗಳಲ್ಲಿ ಪ್ರಮುಖವಾದವುಗಳೆಂದರೆ

**ಸಾಮಾಜಿಕ ಮತ್ತು ಆರ್ಥಿಕ ಸಮಸ್ಯೆಗಳು**

1. ಬಡತನ: ಬುಡಕಟ್ಟು ಸಮುದಾಯಗಳಲ್ಲಿ ಬಹಳಷ್ಟು ಕುಟುಂಬಗಳಲ್ಲಿ ಬಡತನವಿರುವುದನ್ನು ಕಾಣಬಹುದು. ಈ ಬಡತನ ಎಂಬುದು ಮಹಿಳೆಯರು ಮತ್ತು ಮಕ್ಕಳ ಮೇಲೆ ತೀವ್ರವಾದ ಪರಿಣಾಮ ಬೀರುತ್ತದೆ. ಇದರಿಂದ ಆಹಾರ, ಶಿಕ್ಷಣ ಹಾಗೂ ಆರೋಗ್ಯ ಸೇವೆಗಳನ್ನು ಪಡೆದುಕೊಳ್ಳಲು ಇವರಿಗೆ ಕಷ್ಟವಾಗುತ್ತದೆ.
2. ಭೂಮಿ ಕಳೆದುಕೊಳ್ಳುವುದು ಕಳೆದುಕೊಳ್ಳುವುದು ಮತ್ತು ಸ್ಥಳಾಂತರ: ಸರ್ಕಾರಗಳು ಅಭಿವೃದ್ಧಿ ಯೋಜನೆಗಳ ಹೆಸರಿನಲ್ಲಿ ರಸ್ತೆ, ಗಣಿಗಾರಿಕೆ, ರೆಸಾರ್ಟ್ ಉದ್ಯಮ ಮತ್ತು ಅರಣ್ಯ ಸಂರಕ್ಷಣಾ ಕ್ರಮಗಳಿಂದಾಗಿ ಅನೇಕ ಬುಡಕಟ್ಟು ಜನರು ತಮ್ಮ ಸಾಂಪ್ರದಾಯಿಕ ಭೂಮಿಯಿಂದ ಸ್ಥಳಾಂತರ ಮಾಡಬೇಕಾಗುತ್ತದೆ. ಇದರಿಂದ ಅವರ ಜೀವನೋಪಾಯ, ಸಂಸ್ಕೃತಿ, ಆಚಾರ-ವಿಚಾರಗಳ ಮೇಲೆ ಪರಿಣಾಮ ಬೀರಲು ಕಾರಣವಾಗುತ್ತದೆ.
3. ಶೋಷಣೆ ಮತ್ತು ಅಂಚಿನಲ್ಲಿರುವಿಕೆ: ಬುಡಕಟ್ಟು ಮಹಿಳೆಯರು ಮತ್ತು ಮಕ್ಕಳು ಸಾಮಾಜಿಕ ತಾರತಮ್ಯ ಮತ್ತು ಶೋಷಣೆಗೆ ಒಳಗಾಗುತ್ತಾರೆ. ಅವರಿಗೆ ಕಡಿಮೆ ವೇತನದ ಕೆಲಸಗಳು ಸಿಗುತ್ತವೆ. ಹಾಗೂ ದುರ್ಬಳಿಕೆಗೆ ದುರ್ಬಳಕೆಗೆ ಒಳಗಾಗುವ ಸಂಭವವಿರುತ್ತದೆ.
4. ಸಂಸ್ಕೃತಿಯ ಅವನತಿ: ಆಧುನೀಕರಣದ ಪ್ರಭಾವದಿಂದಾಗಿ ಬುಡಕಟ್ಟು ಜನಗಳ ಜನರ ಸಾಂಪ್ರದಾಯಿಕ ಆಚರಣೆಗಳು, ಭಾಷೆಗಳು, ಕಲೆಗಳು ಕಣ್ಮರೆಯಾಗುವ ಅಪಾಯವಿದೆ.

5. ಲಿಂಗ ತಾರತಮ್ಯ: ಬುಡಕಟ್ಟು ಸಮಾಜಗಳಲ್ಲಿಯೂ ಲಿಂಗತಾರತಮ್ಯವಿದೆ. ಮಹಿಳೆಯರಿಗೆ ಆಸ್ಥಿ ಆಸ್ತಿ ಹಕ್ಕುಗಳು ಇರುವುದಿಲ್ಲ. ಅವರು ಪುರುಷರಿಗಿಂತ ಕಡಿಮೆ ಸ್ಥಾನಮಾನವನ್ನು ಹೊಂದಿರುತ್ತಾರೆ. ಹಾಗೂ ದೈಹಿಕ, ಮಾನಸಿಕ, ಲೈಂಗಿಕ ಹಿಂಸೆಗೆ ಒಳಗಾಗುವ ಸಾಧ್ಯತೆ ಇದೆ.
6. ಬಾಲ್ಯ ವಿವಾಹ: ಬುಡಕಟ್ಟು ಸಮುದಾಯಗಳಲ್ಲಿ ಬಾಲ್ಯವಿವಾಹ ಪದ್ಧತಿ ಇನ್ನೂ ಚಾಲ್ತಿಯಲ್ಲಿದೆ. ಇದು ಹೆಣ್ಣು ಮಕ್ಕಳ ಆರೋಗ್ಯ ಮತ್ತು ಶಿಕ್ಷಣದ ಮೇಲೆ ಪರಿಣಾಮ ಬೀರುತ್ತದೆ.

**ಆರೋಗ್ಯ ಸಮಸ್ಯೆಗಳು:**

1. ಅಪೌಷ್ಟಿಕತೆ: ಬುಡಕಟ್ಟು ಮಹಿಳೆಯರು ಮತ್ತು ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ. ಇದು ಅವರ ದೈಹಿಕ ಮತ್ತು ಮಾನಸಿಕ ಬೆಳವಣಿಗೆಯ ಮೇಲೆ ಪರಿಣಾಮ ಬೀರುತ್ತದೆ. ಹಾಗೂ ರೋಗಗಳಿಗೆ ತುತ್ತಾಗುವ ಸಾಧ್ಯತೆಯಿರುತ್ತದೆ.
2. ಸಾಂಕ್ರಾಮಿಕ ರೋಗಗಳು: ಬುಡಕಟ್ಟು ಪ್ರದೇಶಗಳಲ್ಲಿ ಕಳಪೆ ಆರೋಗ್ಯ ಸೌಲಭ್ಯಗಳು ಮತ್ತು ಅರಿವಿನ ಕೊರತೆಯಿಂದಾಗಿ ಮಲೇರಿಯಾ, ಕ್ಷಯ, ಮತ್ತು ಅತಿಸಾರ ಹಾಗೂ ಇನ್ನಿತರ ಇತರ ಸಾಂಕ್ರಮಿಕ ಸಾಂಕ್ರಾಮಿಕ ರೋಗಗಳು ಹೆಚ್ಚಾಗಿ ಕಂಡುಬರುತ್ತವೆ.
3. ಹೆರಿಗೆ ಮತ್ತು ಶಿಶು ಜನನ: ಬುಡಕಟ್ಟು ಮಹಿಳೆಯರು ಆರೋಗ್ಯಕ್ಕೆ ಹೆಚ್ಚಿನ ಗಮನ ಕೊಡುವುದಿಲ್ಲ. ಹಾಗೂ ಮಹಿಳೆಯರಿಗೆ ಸೂಕ್ತವಾದ ಹೆರಿಗೆ ಸೌಲಭ್ಯಗಳು ಸಿಗದ ಕಾರಣ ತಾಯಿ ಮತ್ತು ಶಿಶು ಮರಣ ಪ್ರಮಾಣ ಹೆಚ್ಚಾಗಲು ಕಾರಣವಾಗಿದೆ.
4. ಆರೋಗ್ಯ ಸೇವೆಗಳ ಕೊರತೆ: ಬುಡಕಟ್ಟು ಪ್ರದೇಶಗಳು ದೂರದ ಮತ್ತು ದುರ್ಗಮವಾಗಿರುವುದರಿಂದ ಅಲ್ಲಿ ಉತ್ತಮ ಗುಣಮಟ್ಟದ ಆರೋಗ್ಯ ಸೇವೆಗಳು ಲಭ್ಯವಿರುವುದಿಲ್ಲ. ತರಬೇತಿ ಪಡೆದ ವೈದ್ಯರು ಮತ್ತು ಆರೋಗ್ಯ ಕಾರ್ಯಕರ್ತರ ಕೊರತೆಯಿದೆ.

**ಶಿಕ್ಷಣದ ಸಮಸ್ಯೆಗಳು**

1. ಶಾಲೆಯ ಕೊರತೆ ಮತ್ತು ಕಳಪೆ ಮೂಲಸೌಕರ್ಯ: ಅನೇಕ ಬುಡಕಟ್ಟು ಪ್ರದೇಶಗಳಲ್ಲಿ ಶಾಲೆಗಳಿಲ್ಲ. ಅಥವಾ ಇದ್ದರೂ ಅವು ಕಳಪೆ ಮೂಲ ಸೌಕರ್ಯವನ್ನು ಹೊಂದಿರುತ್ತವೆ. ಇದು ಮಕ್ಕಳಿಗೆ ಉತ್ತಮವಾದ ಶಿಕ್ಷಣ ಪಡೆಯಲು ಅಡ್ಡಿಯಾಗುತ್ತದೆ.
2. ಭಾಷಾ ತಡೆ: ಬುಡಕಟ್ಟು ಮಕ್ಕಳು ತಮ್ಮದೇ ಆದ ಭಾಷೆಗಳನ್ನು ಮಾತನಾಡುತ್ತಾರೆ.

ಆದರೆ ಶಾಲೆಗಳಲ್ಲಿ ಬೋಧನಾ ಮಾಧ್ಯಮವು ಬೇರೆಯಾಗಿರುತ್ತದೆ. ಇದರಿಂದ ಅವರು ಪಾಠ ಪ್ರವಚನಗಳನ್ನು ಅರ್ಥ ಮಾಡಿಕೊಳ್ಳಲು ಕಷ್ಟವಾಗುತ್ತದೆ. ಹಾಗೂ ಶಾಲೆಗಳಿಂದ ಹೊರಗುಳಿಯುವ ಸಾಧ್ಯತೆ ಹೆಚ್ಚಾಗಿರುತ್ತದೆ.

3. ಶಿಕ್ಷಕರ ಗೈರು ಹಾಜರಿ: ಬುಡಕಟ್ಟು ಪ್ರದೇಶಗಳಲ್ಲಿ ಶಿಕ್ಷಕರ ಗೈರು ಹಾಜರಿಯು ಒಂದು ಗಂಭೀರ ಸಮಸ್ಯೆಯಾಗಿದೆ. ಇದು ಮಕ್ಕಳ ಕಲಿಕೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರಲು ಕಾರಣವಾಗುತ್ತದೆ.

4. ಪೋಷಕರ ಅನಕ್ಷರತೆ ಮತ್ತು ಆರ್ಥಿಕ ತೊಂದರೆಗಳು: ಅನೇಕ ಬುಡಕಟ್ಟು ಪೋಷಕರು ಅವಿದ್ಯಾವಂತರಾಗಿರುವುದರಿಂದ ಅವಿದ್ಯಾವಂತರಾಗಿರುವುದರಿಂದ ಅವರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಗಮನ ಕೊಡುವುದಿಲ್ಲ. ಬಡತನದಿಂದಾಗಿ ಮಕ್ಕಳು ಶಾಲೆಯನ್ನು ಬಿಟ್ಟು ದುಡಿಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ರೀತಿ ಬುಡಕಟ್ಟು ಮಹಿಳೆಯರು ಮತ್ತು ಮಕ್ಕಳು ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಮತ್ತು ಆರೋಗ್ಯ ಸಮಸ್ಯೆಗಳನ್ನು ಪ್ರತಿನಿತ್ಯ ಅನುಭವಿಸುತ್ತಿದ್ದಾರೆ.

**ಸಲಹೆಗಳು:**

1. ಬುಡಕಟ್ಟು ಸಮುದಾಯಗಳಲ್ಲಿ ಸರ್ಕಾರದ ಕಾರ್ಯಕ್ರಮಗಳ ಬಗ್ಗೆ ಅರಿವನ್ನು ಮೂಡಿಸುವುದು.
2. ಕಾರ್ಯಕ್ರಮಗಳ ಅನುಷ್ಟಾನದಲ್ಲಿ ಅನುಷ್ಠಾನದಲ್ಲಿ ಪಾರದರ್ಶಕತೆಯನ್ನು ತರುವುದು ಮತ್ತು ದಕ್ಷತೆಯನ್ನು ಅನುಸರಿಸುವುದು.
3. ಮಹಿಳೆಯರು ಮತ್ತು ಮಕ್ಕಳ ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡುವುದು.
4. ಬುಡಕಟ್ಟು ಸಮುದಾಯಗಳ ಸಕ್ರಿಯ ಭಾಗವಹಿಸುವಿಕೆಯನ್ನು ಪ್ರೋತ್ಸಾಹಿಸುವುದು.
5. ಯೋಜನೆಗಳ ಪ್ರಗತಿಯನ್ನು ನಿಯಮಿತವಾಗಿ ಮೇಲ್ವಿಚಾರಣೆ ಮಾಡುವುದು ಮತ್ತು ಮೌಲ್ಯಮಾಪನ ಮಾಡುವುದು.
6. ಬುಡಕಟ್ಟು ಸಮುದಾಯಗಳ ಸಂಸ್ಕೃತಿ ಮತ್ತು ಸಂಪ್ರದಾಯಗಳನ್ನು ಗೌರವಿಸುವುದು ಹಾಗೂ ಅವರ ಅಗತ್ಯತೆಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ರೂಪಿಸುವುದು.
7. ಸರ್ಕಾರ, ಸಮುದಾಯ ಮತ್ತು ಸ್ಥಳೀಯ ಸಂಸ್ಥೆಗಳು ಒಟ್ಟಾಗಿ ಕೆಲಸವನ್ನು ಮಾಡಿದಾಗ ಕರ್ನಾಟಕದ ಬುಡಕಟ್ಟು ಮಹಿಳೆಯರು ಮತ್ತು ಮಕ್ಕಳು

ಉತ್ತಮವಾದ ಭವಿಷ್ಯವನ್ನು ಕಂಡುಕೊಳ್ಳಲು ಸಾಧ್ಯವಾಗುತ್ತದೆ.

**ಉಪಸಂಹಾರ:**

ಬುಡಕಟ್ಟು ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿಗಾಗಿ ಸರ್ಕಾರ ಮತ್ತು ಸಮಾಜ ಒಟ್ಟಾಗಿ ಕೆಲಸ ಮಾಡಬೇಕಾಗಿದೆ. ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸುವುದು, ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು, ಸಾಮಾಜಿಕ ಕಟ್ಟುಪಾಡುಗಳನ್ನು ಹೋಗಲಾಡಿಸುವುದು ಮತ್ತು ಅನುಷ್ಟಾನದ ಅನುಷ್ಠಾನದ ಪ್ರಕ್ರಿಯೆಯನ್ನು ಬಲಪಡಿಸುವುದು ಅಗತ್ಯವಾಗಿದೆ. ಬುಡಕಟ್ಟು ಮಕ್ಕಳು ನಮ್ಮ ದೇಶದ ಅಮೂಲ್ಯ ಸಂಪತ್ತು. ಅವರ ಆರೋಗ್ಯ, ಶಿಕ್ಷಣ ಮತ್ತು ಸುರಕ್ಷತೆಯನ್ನು ಖಚಿತಪಡಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಸೂಕ್ತ ಕಾರ್ಯಕ್ರಮಗಳನ್ನು ಜಾರಿಗೆ ತರುವುದರ ಮೂಲಕ ನಾವು ಮಕ್ಕಳಲ್ಲಿರುವ ಸಾಮರ್ಥ್ಯವನ್ನು, ಪ್ರತಿಭೆಯನ್ನು ಬೆಳಕಿಗೆ ತರುವುದು. ಹಾಗೂ ಮಹಿಳೆಯರನ್ನು ಸಬಲೀಕರಣಗೊಳಿಸುವುದು ನಮ್ಮ ನಿಮ್ಮೆಲ್ಲರ ಆದ್ಯ ಕರ್ತವ್ಯವಾಗಿರುತ್ತದೆ.

## ಪರಾಮರ್ಶನ ಗ್ರಂಥಗಳು:


1. ಮಧುಗುಂಡ್ಲುಪೇಟೆ, (2002), ಕರ್ನಾಟಕ ಬುಡಕಟ್ಟು ಜನಾಂಗಗಳ ಅಭಿವೃದ್ಧಿ, ಅಕ್ಷತಾ ಪ್ರಕಾಶನ, ಮೈಸೂರು.
2. ರಾಮಕೃಷ್ಣ ಆರ್., (2007), ಕರ್ನಾಟಕದ ಬುಡಕಟ್ಟುಗಳು, ಪ್ರಚಾರ ಪುಸ್ತಕ ಮಾಲೆ ಪ್ರಸಾರಾಂಗ, ಮೈಸೂರು.
3. ಪಾರ್ವತಮ್ಮ ಸಿ. ಮತ್ತುರಾಜೇಗೌಡ ಜಿ.ಎಸ್. (ಸಂ), (2007), ಆದಿವಾಸಿ ಸಮುದಾಯಗಳ ಬದುಕು ಬವಣೆ, ಗ್ರಾಮೀಣ ಮತ್ತು ಆದಿವಾಸಿ ಅಭಿವೃದ್ಧಿ ಸಂಶೋಧನಾ ಕೇಂದ್ರ, ಮೈಸೂರು.
4. ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ ನಿರ್ದೇಶನಾಲಯ, (2023), ಕರ್ನಾಟಕ ಅಂಕಿಅಂಶಗಳ ನೋಟ: 2022–23 ನೇ ವಾರ್ಷಿಕ ವರದಿ, ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ ನಿರ್ದೇಶನಾಲಯ, ಬೆಂಗಳೂರು.
5. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, (2023), ಮಹಿಳಾ ಮತ್ತು ಮಕ್ಕಳ ಇಲಾಖೆಯ 2023–24 ನೇ ವಾರ್ಷಿಕ ವರದಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
6. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, (2025), ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ 2024–25 ನೇ ವಾರ್ಷಿಕ ವರದಿ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.



**Funding:**

This study was not funded by any grant.

**Conflict of interest:**

The Authors have no conflict of interest to declare that they are relevant to the content of this article.



**About the License:**

© The Authors 2024. The text of this article is open access and licensed under a Creative Commons Attribution 4.0 International License.